**All India Radio: Bangalore**
**National Bulletin In Kannada**
**16.03.2026  07.35 a.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**16.03.2026  07.35 a.m.**

**<><><><>**

ಮುಖ್ಯಾಂಶಗಳು

1. ನಾಲ್ಕು ರಾಜ್ಯಗಳು ಹಾಗೂ ಒಂದು ಕೇಂದ್ರಾಡಳಿತ ಪ್ರದೇಶಗಳ ವಿಧಾನಸಭಾ ಚುನಾವಣಾ ವೇಳಾಪಟ್ಟಿ ಪ್ರಕಟ
2. ಪಶ್ಚಿಮ ಏಷ್ಯಾ ಸಂಘರ್ಷ ; ಭಾರತೀಯರ ಅನುಕೂಲಕ್ಕಾಗಿ ಏರ್ ಇಂಡಿಯಾದಿಂದ ಇಲ ವಿಮಾನಗಳ ಕಾರ್ಯಾಚರಣೆ
3. ತುರ್ತು ದಾಸ್ತಾನಿನಿಂದ ಬೃಹತ್ ಪ್ರಮಾಣದ ತೈಲ ಬಿಡುಗಡೆ ಮಾಡಲು ಅಂತಾರಾಷ್ಟ್ರೀಯ ಇಂಧನ ಸಂಸ್ಥೆ ನಿರ್ಧಾರ
4. ಇಂಡಿಯನ್ ವೇಲ್ಸ್ ಟೆನಿಸ್ ಟೂರ್ನಿ ; ಇಟಲಿಯ ಯಾನಿಕ್ ಸಿನ್ನರ್‌ಗೆ ಪುರುಷರ ಸಿಂಗಲ್ಸ್ ಪ್ರಶಸ್ತಿ

<><><><>

ಕೇಂದ್ರ ಚುನಾವಣಾ ಆಯೋಗವು ಅಸ್ಸಾಂ, ಕೇರಳ, ತಮಿಳುನಾಡು ಮತ್ತು ಪಶ್ಚಿಮ ಬಂಗಾಳ ರಾಜ್ಯಗಳು ಹಾಗೂ ಪುದುಚೆರಿ ಕೇಂದ್ರಾಡಳಿತ ಪ್ರದೇಶಗಳ ವಿಧಾನಸಭಾ ಚುನಾವಣೆಗೆ ವೇಳಾಪಟ್ಟಿ ಪ್ರಕಟಿಸಿದೆ. ನವದೆಹಲಿಯಲ್ಲಿ ಚುನಾವಣಾ ವೇಳಾಪಟ್ಟಿ ಪ್ರಕಟಿಸಿದ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್, ಅಸ್ಸಾಂ, ಕೇರಳ, ಪುದುಚೆರಿ ಮತ್ತು ತಮಿಳುನಾಡು ವಿಧಾನಸಭಾ ಕ್ಷೇತ್ರಗಳಿಗೆ ಒಂದೇ ಹಂತದಲ್ಲಿ ಚುನಾವಣೆ ನಡೆಯಲಿದ್ದು, ಪಶ್ಚಿಮ ಬಂಗಾಳದಲ್ಲಿ ಎರಡು ಹಂತಗಳಲ್ಲಿ ಮತದಾನ ನಡೆಯಲಿದೆ ಎಂದು ತಿಳಿಸಿದರು. ಅಸ್ಸಾಂ, ಕೇರಳ ಮತ್ತು ಪುದುಚೇರಿಯಲ್ಲಿ ಮುಂದಿನ ತಿಂಗಳ ೯ ರಂದು ಮತದಾನ ನಡೆಯಲಿದೆ ಮತ್ತು ತಮಿಳುನಾಡಿನಲ್ಲಿ ೨೩ ರಂದು ಮತದಾನ ನಡೆಯಲಿದೆ. ಪಶ್ಚಿಮ ಬಂಗಾಳದಲ್ಲಿ ಏಪ್ರಿಲ್ ೨೩ ಮತ್ತು ೨೯ ರಂದು ಎರಡು ಹಂತಗಳಲ್ಲಿ ಮತದಾನ ನಡೆಯಲಿದೆ. ನಾಲ್ಕು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶದ ಮತ ಎಣಿಕೆ ಮೇ ೪ ರಂದು ನಡೆಯಲಿದೆ. ಚುನಾವಣಾ ವೇಳಾಪಟ್ಟಿ

ಘೋಷಣೆಯೊಂದಿಗೆ, ಈ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶದಲ್ಲಿ ತಕ್ಷಣದಿಂದ ಮಾದರಿ ನೀತಿ ಸಂಹಿತೆ ಜಾರಿಗೆ ಬಂದಿದೆ ಎಂದು ಅವರು ತಿಳಿಸಿದ್ದಾರೆ.

**ಧ್ವನಿ : ಜ್ಞಾನೇಶ್ ಕುಮಾರ್**

ಒಟ್ಟು ೮೨೪ ಕ್ಷೇತ್ರಗಳಿಗೆ ನಡೆಯಲಿರುವ ವಿಧಾನಸಭಾ ಚುನಾವಣೆಗೆ ೧೭ ಕೋಟಿಗೂ ಹೆಚ್ಚು ಜನರು ಮತ ಚಲಾಯಿಸಲು ಅರ್ಹರಾಗಿದ್ದಾರೆ. ಸುಮಾರು ಎರಡು ಲಕ್ಷಕ್ಕೂ ಹೆಚ್ಚು ಮತದಾನ ಕೇಂದ್ರಗಳನ್ನು ತೆರೆಯಲಾಗುವುದು ಮತ್ತು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶದಾದ್ಯಂತ ಸುಮಾರು ೨೫ ಲಕ್ಷ ಚುನಾವಣಾ ಅಧಿಕಾರಿಗಳನ್ನು ನಿಯೋಜಿಸಲಾಗುವುದು ಎಂದು ಜ್ಞಾನೇಶ್ ಕುಮಾರ್ ಹೇಳಿದ್ದಾರೆ. ಚುನಾವಣಾ ಪ್ರಕ್ರಿಯೆಯನ್ನು ಹೆಚ್ಚು ಪಾರದರ್ಶಕವಾಗಿಸಲು ಆಯೋಗವು ಇತ್ತೀಚೆಗೆ ೩೦ ಹೊಸ ಉಪಕ್ರಮಗಳನ್ನು ಪರಿಚಯಿಸಿದೆ ಎಂದು ಹೇಳಿದ ಅವರು, ಪ್ರತಿ ಮತಗಟ್ಟೆಯಲ್ಲಿ ಗರಿಷ್ಠ ಸಾವಿರದ ೨೦೦ ಮತದಾರರು ಮತ್ತು ದಿನವಿಡೀ ಮೇಲ್ವಿಚಾರಣೆಗಾಗಿ ೧೦೦ ಪ್ರತಿಶತ ವೆಬ್‌ಕಾಸ್ಟಿಂಗ್ ಖಚಿತಪಡಿಸಿಕೊಳ್ಳಲಾಗುವುದು ಎಂದು ಅವರು ಹೇಳಿದ್ದಾರೆ. ೨೯೪ ಸದಸ್ಯರ ಪಶ್ಚಿಮ ಬಂಗಾಳದ ವಿಧಾನಸಭೆಯ ಅವಧಿ ಮೇ ೭ ರಂದು, ೧೨೬ ಸದಸ್ಯರ ಅಸ್ಸಾಂ ವಿಧಾನಸಭೆಯ ಅವಧಿ ಮೇ ೨೦ ರಂದು, ತಮಿಳುನಾಡಿನಲ್ಲಿ ೨೩೪ ಸದಸ್ಯರ ವಿಧಾನಸಭೆಯ ಅವಧಿ ಮೇ ೧೦ ರಂದು ಮತ್ತು ೧೪೦ ಸದಸ್ಯರ ಕೇರಳ ವಿಧಾನಸಭೆಯ ಅವಧಿ ಮೇ ೨೩ ರಂದು ಮುಕ್ತಾಯವಾಗಲಿದೆ. ಪುದುಚೆರಿಯಲ್ಲಿ ೩೦ ಸದಸ್ಯರ ವಿಧಾನಸಭೆಯ ಅವಧಿ ಜೂನ್ ೧೫ ರಂದು ಪೂರ್ಣಗೊಳ್ಳಲಿದೆ. ಕರ್ನಾಟಕ ಮತ್ತು ಮಹಾರಾಷ್ಟ್ರಗಳ ಎರಡು ವಿಧಾನಸಭಾ ಕ್ಷೇತ್ರಗಳು ಹಾಗೂ ಗೋವಾ, ಗುಜರಾತ್, ನಾಗಾಲ್ಯಾಂಡ್ ಮತ್ತು ತ್ರಿಪುರಾಗಳ ತಲಾ ಒಂದು ಕ್ಷೇತ್ರ ಸೇರಿದಂತೆ ಒಟ್ಟು ಎಂಟು ವಿಧಾನಸಭಾ ಕ್ಷೇತ್ರಗಳಲ್ಲಿ ಉಪಚುನಾವಣೆ ದಿನಾಂಕ ಘೋಷಿಸಲಾಗಿದೆ. ಗೋವಾ, ಕರ್ನಾಟಕ, ನಾಗಾಲ್ಯಾಂಡ್ ಮತ್ತು ತ್ರಿಪುರಾಗಳಲ್ಲಿ ಏಪ್ರಿಲ್ ೯ ರಂದು ಹಾಗೂ ಗುಜರಾತ್ ಮತ್ತು ಮಹಾರಾಷ್ಟ್ರಗಳಲ್ಲಿ ಮುಂದಿನ ತಿಂಗಳ ೨೩ ರಂದು ಮತದಾನ ನಡೆಯಲಿದೆ. ಕರ್ನಾಟಕದಲ್ಲಿ ಮಾಜಿ ಶಾಸಕ ಮೇಟಿ ಹುಲ್ಲಪ್ಪ ಯಮನಪ್ಪ ಅವರ ನಿಧನದಿಂದ ತೆರವಾಗಿದ್ದ ಬಾಗಲಕೋಟೆ ಕ್ಷೇತ್ರ ಹಾಗೂ ಮಾಜಿ ಶಾಸಕ ಶಾಮನೂರು ಶಿವಶಂಕರಪ್ಪ ಅವರ ನಿಧನದಿಂದ ತೆರವಾಗಿದ್ದ ದಾವಣಗೆರೆ ದಕ್ಷಿಣ ಕ್ಷೇತ್ರಕ್ಕೆ ಉಪಚುನಾವಣೆಗೆ ವೇಳಾಪಟ್ಟಿ ಪ್ರಕಟಿಸಲಾಗಿದೆ. ನಾಮಪತ್ರ ಸಲ್ಲಿಸಲು ಈ ತಿಂಗಳ ೨೩ ರವರೆಗೆ ಅವಕಾಶವಿದ್ದು, ಮರುದಿನ ನಾಮಪತ್ರಗಳ ಪರಿಶೀಲನೆ ನಡೆಯಲಿದೆ. ಉಮೇದುವಾರಿಕೆ ಹಿಂಪಡೆಯಲು ಮಾರ್ಚ್ ೨೬ ಕೊನೆಯ ದಿನವಾಗಿದೆ.

<><><>

೨೦೨೬-೨೭ನೇ ಸಾಲಿನ ರೈಲ್ವೆ ಸಚಿವಾಲಯದ ನಿಯಂತ್ರಣದಲ್ಲಿರುವ ಅನುದಾನಗಳ ಬೇಡಿಕೆಗಳ ಕುರಿತು ಲೋಕಸಭೆಯಲ್ಲಿ ಇಂದು ಚರ್ಚೆ ಮತ್ತು ಮತದಾನ ನಡೆಯಲಿದೆ. ಇದರ ಜೊತೆಗೆ, ೨೦೨೬-೨೭ನೇ ಸಾಲಿನ ಕೃಷಿ ಮತ್ತು ರೈತ ಕಲ್ಯಾಣ ಸಚಿವಾಲಯದ ನಿಯಂತ್ರಣದಲ್ಲಿರುವ ಅನುದಾನಗಳ ಬೇಡಿಕೆಗಳ ಮೇಲಿನ ಚರ್ಚೆಯನ್ನು ಸಹ ಸದನದ ವ್ಯವಹಾರಗಳಲ್ಲಿ ಪಟ್ಟಿ ಮಾಡಲಾಗಿದೆ. ರಾಜ್ಯಸಭೆಯಲ್ಲಿ, ಸದನವು ೨೦೨೬ ರ ವಿನಿಯೋಗ ಮಸೂದೆಯನ್ನು ಪರಿಗಣನೆ ಮತ್ತು ವಾಪಸಾತಿಗಾಗಿ ಕೈಗೆತ್ತಿಕೊಳ್ಳಲು ನಿರ್ಧರಿಸಲಾಗಿದೆ. ೨೦೨೫-೨೬ನೇ ಸಾಲಿನ ಹಣಕಾಸು ವರ್ಷದ ಸೇವೆಗಳಿಗಾಗಿ ಭಾರತದ ಕ್ರೋಢೀಕೃತ ನಿಧಿಯಿಂದ ಮತ್ತು ಅದರಿಂದ ಕೆಲವು ಹೆಚ್ಚುವರಿ ಮೊತ್ತಗಳ ಪಾವತಿ ಮತ್ತು ಹಂಚಿಕೆಗೆ ಅಧಿಕಾರ ನೀಡಲು ಮಸೂದೆ ಪ್ರಯತ್ನಿಸುತ್ತದೆ.

<><><>

ಪಶ್ಚಿಮ ಏಷ್ಯಾದಲ್ಲಿ ಪರಿಸ್ಥಿತಿ ಉಲ್ಬಣಗೊಳ್ಳುತ್ತಿರುವ ನಡುವೆ ಅಲ್ಲಿ ಸಿಲುಕಿರುವ ಭಾರತೀಯರ ಅನುಕೂಲಕ್ಕಾಗಿ ಏರ್ ಇಂಡಿಯಾ ಮತ್ತು ಏರ್ ಇಂಡಿಯಾ ಎಕ್ಸ್‌ಪ್ರೆಸ್ ಇಂದು ಒಟ್ಟು ೪೮ ವಿಮಾನಗಳನ್ನು ಕಾರ್ಯಾಚರಣೆಗೊಳಿಸಲಿವೆ. ಇದರಲ್ಲಿ ಜೆಡ್ಡಾಗೆ ೧೦ ಮತ್ತು ಮಸ್ಕಟ್‌ಗೆ ೧೨ ವಿಮಾನಗಳು ಸೇರಿವೆ. ದೆಹಲಿ, ಮುಂಬೈ, ಬೆಂಗಳೂರು, ಮಂಗಳೂರು ಮತ್ತು ಕೊಚ್ಚಿ ಸೇರಿದಂತೆ ಪ್ರಮುಖ ನಗರಗಳಿಂದ ಈ ಸೇವೆ ಲಭ್ಯವಿರಲಿದ್ದು, ಸ್ಪೈಸ್ ಜೆಟ್ ಮತ್ತು ಕತಾರ್ ಏರ್ವೇಸ್ ಕೂಡ ವಿಶೇಷ ವಿಮಾನಗಳ ಮೂಲಕ ಪ್ರಯಾಣಿಕರಿಗೆ ನೆರವಾಗಲಿದೆ. ಇರಾನ್ ಮತ್ತು ಇರಾಖ್ ವಾಯುಪ್ರದೇಶ ನಿರ್ಬಂಧಿತವಾಗಿರುವುದರಿಂದ ವಿಮಾನಗಳು ಪರ್ಯಾಯ ಮಾರ್ಗಗಳಲ್ಲಿ ಸಂಚರಿಸಬೇಕಾಗಿದ್ದು, ಪ್ರಯಾಣದ ಅವಧಿ ಹೆಚ್ಚಾಗಲಿದೆ. ಈ ಹಿನ್ನೆಲೆಯಲ್ಲಿ ವಿಮಾನಯಾನ ಮಹಾ ನಿರ್ದೇಶನಾಲಯ ಏರ್ ಇಂಡಿಯಾ ಸಿಬ್ಬಂದಿಯ ಕರ್ತವ್ಯದ ಅವಧಿಯ ನಿಯಮಗಳಲ್ಲಿ ತಾತ್ಕಾಲಿಕ ಸಡಲಿಕೆ ಮಾಡಿದೆ.

<><><>

ಕತಾರ್ ಏರ್ವೇಸ್ ವಿಮಾನಯಾನ ಸಂಸ್ಥೆ ಮುಂದಿನ ಎರಡು ದಿನಗಳಲ್ಲಿ ಭಾರತದ ನವದೆಹಲಿ, ಮುಂಬೈ ಮತ್ತು ಕೊಚ್ಚಿ ನಗರಗಳಿಗೆ ಹೆಚ್ಚುವರಿ ಮೂರು ವಿಮಾನಗಳ ಸೇವೆ ಒದಗಿಸಲಿದೆ ಎಂದು ದೋಹದಲ್ಲಿರುವ ಭಾರತೀಯ ರಾಯಭಾರಿ ಕಚೇರಿ ತಿಳಿಸಿದೆ. ಪ್ರಯಾಣಿಕರು ವಿಮಾನಯಾನ ಸಂಸ್ಥೆಯ ಅಧಿಕೃತ ಜಾಲತಾಣ ಮೊಬೈಲ್ ಆಪ್ ಮೂಲಕ ಟಿಕೆಟ್ ಕಾಯ್ದಿರಿಸಬಹುದಾಗಿದೆ. ಕೇವಲ ಖಚಿತಪಟ್ಟ ಟಿಕೆಟ್ ಹೊಂದಿರುವ ಪ್ರಯಾಣಿಕರು ಮಾತ್ರ ವಿಮಾನ ನಿಲ್ದಾಣಕ್ಕೆ

ಆಗಮಿಸುವಂತೆ ಸಂಸ್ಥೆ ಸೂಚನೆ ನೀಡಿದೆ. ಕತಾರ್‌ನಲ್ಲಿ ಸಿಲುಕಿರುವ ಭಾರತೀಯ ನಾಗರಿಕರು ಹಾಗೂ ತುರ್ತು ಸಂದರ್ಭ ಎದುರಿಸುತ್ತಿರುವವರ ಪ್ರಯಾಣಕ್ಕೆ ಅನುಕೂಲ ಮಾಡಿಕೊಡಲು ಭಾರತೀಯ ರಾಯಭಾರಿ ಕಚೇರಿ ಸ್ಥಳೀಯ ಅಧಿಕಾರಿಗಳು ಮತ್ತು ವಿಮಾನಯಾನ ಸಂಸ್ಥೆಯೊಂದಿಗೆ ನಿರಂತರ ಸಮನ್ವಯ ಸಾಧಿಸುತ್ತಿದೆ. ಇದರ ಜೊತೆಗೆ ಸಲ್ವಾ ಗಡಿ ಮೂಲಕ ಸೌದಿ ಅರೆಬಿಯಾಕ್ಕೆ ತೆರಳಲು ಇಚ್ಛಿಸುವ ಭಾರತೀಯರಿಗೆ ೯೬ ಗಂಟೆಗಳ ಅವಧಿಯ ತಾತ್ಕಾಲಿಕ ಟ್ರಾನ್ಸಿಸ್ಟ್ ವಿಸಾ ಪಡೆಯಲು ರಾಯಭಾರ ಕಚೇರಿ ಅಗತ್ಯ ನೆರವು ನೀಡುತ್ತಿದೆ.

<><><>

ಜಾಗತಿಕ ಮಾರುಕಟ್ಟೆಯಲ್ಲಿ ತೈಲ ಬೆಲೆಗಳನ್ನು ನಿಯಂತ್ರಿಸುವ ನಿಟ್ಟಿನಲ್ಲಿ ಅಂತಾರಾಷ್ಟ್ರೀಯ ಇಂಧನ ಸಂಸ್ಥೆ ಐಇಎ ಸದಸ್ಯ ರಾಷ್ಟ್ರಗಳು ತಮ್ಮ ತರ್ತು ದಾಸ್ತಾನಿನಿಂದ ಬೃಹತ್ ಪ್ರಮಾಣದ ತೈಲವನ್ನು ಬಿಡುಗಡೆ ಮಾಡಲಿದೆ.

ಏಷ್ಯಾ ಮತ್ತು ಓಷಿಯಾನಿಯಾ ರಾಷ್ಟ್ರಗಳು ತಕ್ಷಣದಿಂದಲೇ ತೈಲ ಬಿಡುಗಡೆ ಪ್ರಕ್ರಿಯೆ ಆರಂಭಿಸಲಿದ್ದು, ಯೂರೋಪ್ ಮತ್ತು ಅಮೆರಿಕದ ರಾಷ್ಟ್ರಗಳು ಈ ತಿಂಗಳ ಅಂತ್ಯದ ವೇಳೆಗೆ ದಾಸ್ತಾನು ಮುಕ್ತಗೊಳಿಸಲಿವೆ. ಇದು ಇತಿಹಾಸದಲ್ಲೇ ಅತಿದೊಡ್ಡ ತುರ್ತು ತೈಲ ಬಿಡುಗಡೆ ಕ್ರಮವಾಗಿದ್ದು, ಜಾಗತಿಕ ಪೂರೈಕೆಗೆ ಬಲವಾದ ರಕ್ಷಣೆ ನೀಡಲಿದೆ ಎಂದು ಸಂಸ್ಥೆ ತಿಳಿಸಿದೆ. ಸುಮಾರು ೪೦೦ ದಶಲಕ್ಷ ಬ್ಯಾರಲ್ ತೈಲವನ್ನು ಬಿಡುಗಡೆ ಮಾಡಲಾಗುತ್ತಿದ್ದು, ಇದು ೨೦೨೨ರಲ್ಲಿ ರಷ್ಯಾ-ಉಕ್ರೇನ್ ಯುದ್ಧದ ಸಮಯದಲ್ಲಿ ಬಿಡುಗಡೆ ಮಾಡಿದ್ದಕ್ಕಿಂತ ೨ರಷ್ಟು ಹೆಚ್ಚಿನ ಪ್ರಮಾಣದ್ದಾಗಿದೆ.

<><><>

ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಬ್ರಜೆಲ್ಸ್‌ನಲ್ಲಿ ಸೈಪ್ರೆಸ್ ವಿದೇಶಾಂಗ ಸಚಿವ ಕಾನ್ಸ್‌ಟನ್‌ಟಿನೋಸ್ ಕಾಂಬೋಸ್ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದರು. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ನೀಡಿರುವ ಅವರು, ಉಭಯ ರಾಷ್ಟ್ರಗಳ ನಡುವಿನ ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುವ ಕುರಿತು ಹಾಗೂ ಪಶ್ಚಿಮ ಏಷ್ಯಾದ ಪ್ರಚಲಿತ ವಿದ್ಯಾಮಾನಗಳ ಬಗ್ಗೆ ಪರಸ್ಪರ ವಿಚಾರ ವಿನಿಮಯ ಮಾಡಿಕೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

<><><>

ಕ್ಯಾಲಿಫೋರ್ನಿಯಾದಲ್ಲಿ ನಡೆಯುತ್ತಿರುವ ಇಂಡಿಯನ್ ವೆಲ್ಸ್ ಓಪನ್ ಟೆನಿಸ್ ಟೂರ್ನಿಯಲ್ಲಿ ಇಟಲಿಯ ಯಾನಿಕ್ ಸಿನ್ನರ್ ಪುರುಷರ ಸಿಂಗಲ್ಸ್ ವಿಭಾಗದ ಪ್ರಶಸ್ತಿಯನ್ನು

ತಮ್ಮದಾಗಿಸಿಕೊಂಡಿದ್ದಾರೆ. ಇಂದು ನಡೆದ ಫೈನಲ್ ಪಂದ್ಯದಲ್ಲಿ ಸಿನ್ನರ್ ರಷ್ಯಾದ ಡ್ಯಾನಿಲ್ ಮೆಡ್ವಿಡೇವ್ ವಿರುದ್ಧ ೭-೬, ೭-೬ ಅಂಕಗಳ ಅಂತರದಲ್ಲಿ ಗೆಲುವು ಸಾಧಿಸಿ ಪ್ರಶಸ್ತಿ ಮುಡಿಗೇರಿಸಿಕೊಂಡಿದ್ದಾರೆ.

<><><><>

ಒಡಿಶಾದ ಮಯೂರ್‌ಭಂಜ್ ಜಿಲ್ಲೆಯಲ್ಲಿ ಸಂಭವಿಸಿದ ಭೀಕರ ಬಿರುಗಾಳಿ ಮತ್ತು ಮಳೆಗೆ ಇಬ್ಬರು ಮೃತಪಟ್ಟಿದ್ದು, ಹಲವರು ಗಂಭೀರವಾಗಿ ಗಾಯಗೊಂಡಿದ್ದಾರೆ. ಜಿಲ್ಲೆಯ ಕನಿಷ್ಠ ೧೨ ಗ್ರಾಮಗಳಲ್ಲಿ ನೂರಾರು ಮನೆಗಳಿಗೆ ಹಾನಿಯಾಗಿದ್ದು, ವಿದ್ಯುತ್ ಕಂಬಗಳು ಮತ್ತು ಮರಗಳು ನೆಲಕ್ಕುರುಳಿವೆ. ಕರಂಜಿಯ ಬ್ಲಾಕ್‌ನ ಕಿಯಾ ಮತ್ತು ಕಂಕಡ ಗ್ರಾಮಗಳು ತೀವ್ರವಾಗಿ ಹಾನಿಗೊಳಗಾಗಿವೆ. ಮೃತರ ಕುಟುಂಬಗಳಿಗೆ ರಾಜ್ಯ ಸರ್ಕಾರ ತಲಾ ೪ ಲಕ್ಷ ರೂಪಾಯಿ ಪರಿಹಾರ ಘೋಷಿಸಿದೆ. ಸುಮಾರು ೪೦ ಮಂದಿ ಸಣ್ಣ ಪುಟ್ಟ ಗಾಯಗಳಿಗೆ ಚಿಕಿತ್ಸೆ ಪಡೆಯುತ್ತಿದ್ದಾರೆ. ಈ ನಡುವೆ ಭಾರತೀಯ ಹವಾಮಾನ ಇಲಾಖೆ ಮಯೂರ್‌ಭಂಜ್ ಜಿಲ್ಲೆಗೆ ಇಂದು ಆರೆಂಜ್ ಅಲರ್ಟ್ ಘೋಷಿಸಿದ್ದು, ಗುಡುಗು ಸಹಿತ ಮಳೆಯ ಮುನ್ಸೂಚನೆ ನೀಡಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>